ಕೃಷಿ ವಿಶ್ವ ವಿದ್ಯಾನಿಲಯ

ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)

ಜಿ.ಕೆ.ವಿ.ಕೆ., ಬೆಂಗಳೂರು–560065

* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 30.01.2024

# ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ

## ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)

## (ದಿನಾಂಕ 31–01–2024 ರಿಂದ 04–02–2024 ವರೆಗೆ)

| ನಿಯತಾಂಕಗಳು | 31.01.2024 | 01.02.2024 | 02.02.2024 | 03.02.2024 | 04.02.2024 |
|---|---|---|---|---|---|
| ಮಳೆ (ಮಿ ಮಿ) | 0 | 0 | 0 | 0 | 0 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 30 | 31 | 31 | 31 | 31 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 16 | 16 | 16 | 16 | 15 |
| ಮೋಡ ( ಪ್ರಮಾಣ) | 3 | 3 | 4 | 4 | 3 |
| ಆರ್ದ್ರತೆ 7.20 ಬೆ (ಶೇ) | 74 | 74 | 74 | 74 | 74 |
| ಆರ್ದ್ರತೆ 2.20 ಮ (ಶೇ) | 28 | 28 | 28 | 26 | 26 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 2 | 2 | 1 | 3 | 4 |
| ಗಾಳಿಯ ದಿಕ್ಕು ( ಡಿಗ್ರಿ) | 71 | 195 | 202 | 158 | 117 |

ಭಾರತೀಯ ಹವಾಮಾನ ಇಲಾಖೆಯ ಮುಂದಿನ ನಾಲ್ಕೈದು ದಿನಗಳಲ್ಲಿ ಮಳೆಯಾಗುವ ಸಾಧ್ಯತೆ ಕಡಿಮೆ ಇದೆ. ದಿನದ ಗರಿಷ್ಠ ಉಷ್ಣಾಂಶ 30.0–31.0$^{o}$ C ಮತ್ತು ಕನಿಷ್ಠ 15.0–16.0$^{o}$ C ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **74 %** ಇದ್ದು ಮಧ್ಯಾಹ್ನ **26-28 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **1–4** ಕಿ.ಮೀ. ವೇಗದಲ್ಲಿ ಬೀಸುವ ಸ0ಭವವಿದೆ.

## ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| | | 1. ರೈತ ಬಾಂದವರು ಹಿಂಗಾರು ಬೆಳೆಗಳನ್ನು ಕಟಾವು ಮಾಡಲು ಸೂಕ್ತ ಕಾಲ.<br>2. ರೈತ ಬಾಂದವರು ಕಟಾವು ಮಾಡಿರುವ ಬೆಳೆಗಳನ್ನು ಸ್ವಚ್ಚ ಮಾಡಿ ಒಕ್ಕಣೆ ಮಾಡಿ, ಬಿಸಿಲಿನಲ್ಲಿ ಒಣಗಿಸಿ ಚೀಲದಲ್ಲಿ ಶೇಖರಿಸಿ.<br>3. ಕಟಾವು ಮಾಡಿದ ಬಿತ್ತನೆ ಬೀಜಗಳನ್ನು ಸರಿಯಾಗಿ ಒಣಗಿಸಬೇಕು. ಅಂದರೆ ಏಕದಳ ದಾನ್ಯಗಳು ತೇವಾಂಶ ಶೇ. 11 ರಿಂದ 12, ದ್ವಿದಳದಾನ್ಯಗಳ ತೇವಾಂಶ ಶೇ.9, ಎಣ್ಣೆಕಾಳುಗಳು ಶೇ.8 ಮತ್ತು ತರಕಾರಿ ಬೀಜಗಳು ಶೇ 5 ರಿಂದ 6 ರಷ್ಟಿರಬೇಕು. ಇದರಿಂದ ಹೆಚ್ಚುದಿನ ಕೆಡದಂತೆ ಬೀಜಗಳನ್ನು ಸಂಸ್ಕರಣೆ ಮಾಡಬಹುದು ಜೊತೆಗೆ ಉಗ್ರಾಣ ಕೀಟದ ಬಾಧೆಯನ್ನು ಕಡಿಮೆಮಾಡಬಹುದು. |
| ಮಾವು | ಹೂವಿನ ಹಂತ ಮತ್ತು ಕಾಯಿ ಬಲಿಯುವ ಹಂತ (ಗೊಟ್ಟೆ ಹಂತ) | 1. ಶುಷ್ಕ ವಾತಾವರಣವಿರುವುದರಿಂದ (ಕಡಿಮೆ ಆರ್ದ್ರತೆ (64–72 %) ಮತ್ತು ಕಡಿಮೆ ರಾತ್ರಿ ಉಷ್ಣಾಂಶ (11–14 $^{o}$C)) ಮಾವು ಬೆಳೆಯಲ್ಲಿ ಬೂದಿರೋಗದ ಸಂಭವ ಹೆಚ್ಚಾಗಿ ಕಂಡುಬಂದಿರುತ್ತದೆ.<br>2. ಬೂದಿರೋಗದ ಹತೋಟಿಗೆ ನೀರಿನಲ್ಲಿ ಕರಗುವ ಗಂಧಕ (ಸಲ್ ಟಾಫ್ 80wp) 3 ಗ್ರಾಂ. ಪ್ರತಿ ಲೀಟರ್ ನೀರಿನಲ್ಲಿ ಮಿಶ್ರ ಮಾಡಿ ಸಿಂಪಡಿಸಿ.<br>3. ಶುಷ್ಕ ವಾತಾವರಣ ಮತ್ತು ನಾಲ್ಕೈದು ದಿನ ಒಣ ಹವೆ ಮುಂದುವರಿಯುವ ಸಂಭವವಿರುವುದರಿಂದ ಒಂದು ಇಲ್ಲ ಎರಡು ಬಾರಿ ನೀರಾವರಿಯನ್ನು ಕೊಡಿ. |
| ಪಶುಸಂಗೋಪನೆ | | 1. ತಾಪಮಾನದಲ್ಲಿ ಹಠಾತ್ ಕುಸಿತದಿಂದ ಪ್ರಾಣಿಗಳನ್ನು ರಕ್ಷಿಸಲು ರಾತ್ರಿಯ ಸಮಯದಲ್ಲಿ ಮುಚ್ಚಿದ ಶೆಡ್ ಪ್ರದೇಶದಲ್ಲಿ ಇರಿಸಿ.<br>2. ಕೆಲವು ಪ್ರದೇಶಗಳಲ್ಲಿ ಚಳಿಗಾಲದ ತಿಂಗಳುಗಳಲ್ಲಿ ಉಂಟಾಗುವ ಕೊರತೆಯ ಅವಧಿಗೆ ಮೇವನ್ನು ಸಂಗ್ರಹಿಸಲು ಸರಿಯಾದ ಕಾಳಜಿ ವಹಿಸಬೇಕು, ಈ ಸಮಯದಲ್ಲಿ ದೀರ್ಘಕಾಲಿಕ ಹುಲ್ಲುಗಳನ್ನು ಕತ್ತರಿಸಬೇಕು. |

ನೋಡಲ್ ಅಧಿಕಾರಿ:

ಕೃಷಿ ಹವಾಮಾನ ವಿಭಾಗ

**ಮೊಬೈಲ್ ಆಫ್:**

- ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮುನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.